ಸಾಬ್, ಸಿದ್ದಲಿಂಗೇಶ ನರೇಗಲ್, ಮಹಮ್ಮದ್ ಇರ್ಫಾನ್, ವಿಜಯ ಗೌಡ ಇತರರು ಉಪಸ್ಥಿತರಿದ್ದರು.

---

# ವಿದ್ಯಾರ್ಥಿ ಮಾರ್ಗದರ್ಶನ ಕಾರ್ಯಾಗಾರ ಯಶಸ್ವಿ




**ನುಡಿಜೇನು ವರದಿ**

**ಹಳಿಯಾಳ:** ಕೆಎಲ್ಎಸ್ ವಿಡಿಐಟಿ ಹಳಿಯಾಳದಲ್ಲಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಲು ಉಪಯುಕ್ತ ಮಾಹಿತಿ ಕುರಿತಾದ ಕಾರ್ಯಗಾರವನ್ನು ಬೋಧಕ ಸಿಬ್ಬಂದಿಗಳಿಗೆ ಫೆ 22ರಂದು ಆಯೋಜಿಸಲಾಗಿತ್ತು. ಈ ಕಾರ್ಯಗಾರಕ್ಕೆ ಸಂಪನ್ಮೂಲ ವ್ಯಕ್ತಿಗಳಾಗಿ ಖ್ಯಾತ ವ್ಯಾಪಾರ ತಂತ್ರ ಸಲಹೆಗಾರರಾದ ಅಮಿತ್ ಸೌಂದಲ್ಗೆಕರ್ ಆಗಮಿಸಿದ್ದರು .

ಶಿಕ್ಷಕರು ವಿದ್ಯಾರ್ಥಿಗಳ ಮನಸ್ಥಿತಿಯನ್ನು ಅರಿಯುವುದು ಅತ್ಯವಶ್ಯಕವಾಗಿದ್ದು, ಮುಕ್ತ ಸಮಾಲೋಚನೆ ಇದಕ್ಕೆ ಸಹಕಾರಿಯಾಗುವುದು ಎಂದು ಹೇಳಿದರು. ವಿದ್ಯಾರ್ಥಿಗಳಲ್ಲಿನ ಕುಂದು ಕೊರತೆಯನ್ನು ಅರಿಯಲು ಸಮಾಲೋಚನೆ ಅಗತ್ಯವಾಗಿದ್ದು, ಶಿಕ್ಷಕರು ವಿದ್ಯಾರ್ಥಿಗಳು ಸಮಾಲೋಚನೆಯಲ್ಲಿ ಮುಕ್ತವಾಗಿ ಮಾತನಾಡುವ ವಾತಾವರಣವನ್ನು ಸೃಷ್ಟಿಸುವುದು ಅಗತ್ಯವಾಗಿದೆ ಎಂದು ಹೇಳಿದರು. ಆಪ್ತ ಸಮಾಲೋಚನೆಯು ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಸಹಕಾರಿಯಾಗುವುದು. ಈ ನಿಟ್ಟಿನಲ್ಲಿ ಶಿಕ್ಷಕರು ಕಾಳಜಿ ವಹಿಸಿ ಸಮಾಲೋಚನೆ ನಡೆಸ ಬೇಕಾಗಿರುವುದು ಅವಶ್ಯವಾಗಿದೆ ಎಂದು ನುಡಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಆಡಳಿತ ಮಂಡಳಿಯ ಅಧ್ಯಕ್ಷ ಶ್ರೀ. ವಿನಾಯಕ ಲೋಕುರ್ ಶಿಕ್ಷಕರು ವಿದ್ಯಾರ್ಥಿಗಳ ಮನಸ್ಥಿತಿ ಅರಿತು ಪಾಠ ಮಾಡಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಮತ್ತು ಕೆ ಎಲ್ ಎಸ್ ಪಿ ಯು ಕಾಲೇಜಿನ ಪ್ರಾಂಶುಪಾಲರಾದ ಶ್ರೀ. ಶ್ರೀನಿವಾಸ ಪ್ರಭು ವೇದಿಕೆ ಮೇಲೆ ಉಪಸ್ಥಿತರಿದ್ದರು. ಟ್ರೈನಿಂಗ್ ಅಂಡ್ ಪ್ಲೇಸ್ಮೆಂಟ್ ಸಂಚಾಲಕ ಪ್ರೊ. ರಜತ್ ಆಚಾರ್ಯ ಕಾರ್ಯಕ್ರಮ ಸಂಯೋಜಿಸಿದ್ದರು. ಪ್ರೊ. ಲಕ್ಷ್ಮಿಹಟ್ಟಿ ಹೋಳಿ ನಿರೂಪಿಸಿದರು. ಈ ಕಾರ್ಯಗಾರದಲ್ಲಿ ಮಹಾವಿದ್ಯಾಲಯದ ನೂರಕ್ಕೂ ಅಧಿಕ ಬೋಧಕ ಸಿಬ್ಬಂದಿಗಳು ಭಾಗವಹಿಸಿದ್ದರು.